**OS: 71/2018**
**D.W-2**

**ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ಕೂಡ್ಲಿಗಿ**

ದಿನಾಂಕಃ 25.06.2025 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಪಾಟೀ ಸವಾಲು ವಾದಿ ಪರ ವಕೀಲರಿಂದ**

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ತಯಾರು ಮಾಡಲು ನಾನೇ ಮಾಹಿತಿ ನೀಡಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಇಂಗ್ಲೀಷ್ ಭಾಷೆಯಲ್ಲಿದೆ. ನನಗೆ ಕನ್ನಡ ಚೆನ್ನಾಗಿ ಬರುತ್ತದೆ, ಇಂಗ್ಲಿಷ್ ಅಲ್ಪ-ಸ್ವಲ್ಪ ಬರುತ್ತದೆ. ವಾದಿ ನನ್ನ ಮಾವನ ಹೆಂಡತಿ ಇರುತ್ತಾರೆ. ಈ ದಾವೆಯ ವಾದಿಯ ಗಂಡ ಹಾಗೂ 2 ನೇ ಪ್ರತಿವಾದಿಯ ಗಂಡ ಅಣ್ಣ-ತಮ್ಮಂದಿರು ಎಂದರೆ ಸರಿ. ವಾದಿಯು ಭಾಗ ಆಗದೆ ಇರುವ ಆಸ್ತಿಗಾಗಿ ಭಾಗಾಂಶ ಕೋರಿ ದಾವಾ ಆಸ್ತಿಗಳ ಮೇಲೆ ಈ ದಾವೆ ಸಲ್ಲಿಸಿದ್ದಾರೆ ಎಂದರೆ ಸರಿಯಲ್ಲ. ವಾದಿಯ ಗಂಡ ಮತ್ತು 2 ನೇ ಪ್ರತಿವಾದಿಯ ಗಂಡ ಈಗಾಗಲೆ ವಿಭಾಗ ಆಗಿದ್ದಾರೆ ಎಂಬುದರ ಬಗ್ಗೆ ದಾಖಲೆ ಕೊಟ್ಟಿರುವ ಬಗ್ಗೆ ನನಗೆ ಗೊತ್ತಿರುವುದಿಲ್ಲ. ಇಲ್ಲಿಯವರೆಗೂ ದಾವಾ ಆಸ್ತಿಗಳಿಗೆ ಸಂಬಂಧಿಸಿದಂತೆ ಯಾವುದೇ ಭಾಗ ಆಗಿರುವುದಿಲ್ಲ ಎಂದರೆ ಸರಿಯಲ್ಲ. ಈ ಸಂಬಂಧವಾಗಿ ಯಾವುದಾದರು ದಾಖಲೆಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದಿರಾ ಎಂದರೆ ನನಗೆ ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಮಾಹಿತಿ ಇದ್ದರು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ವಿಜಯನಗರ, ದಾವಣಗೆರೆ ಮತ್ತು ಕೊಟ್ಟೂರಿನಲ್ಲಿರುವ ಆಸ್ತಿಗಳು ಒಟ್ಟು ಕುಟುಂಬದ ಆಸ್ತಿಗಳು ಎಂದರೆ ಸರಿಯಲ್ಲ. ಎರಡೂ ಆಸ್ತಿಗಳನ್ನು ವಾದಿಯ ಗಂಡ ದುಡಿದು 2 ನೇ ಪ್ರತಿವಾದಿಯ ಗಂಡನ ಹೆಸರಿಗೆ ಕ್ರಯ ಬರೆಸಿಕೊಟ್ಟಿದ್ದಾರೆ ಎಂದರೆ ಸರಿಯಲ್ಲ. ಈ ಸಂಬಂಧವಾಗಿ ದಾಖಲೆಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದೇನೆ. ಈ ಸಂಬಂಧಿವಾಗಿ ಯಾವುದೇ ದಾಖಲೆಗಳನ್ನು ಸಲ್ಲಿಸಿಲ್ಲ ಎಂದರೆ ಸರಿಯಲ್ಲ. ವಾದಿಗಳಿಗೆ ಭಾಗ ಕೊಡಬೇಕಾಗುತ್ತದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ- ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ).

**ಓ,ಹೇ,ಕೇ,ಸರಿ ಇದೆ.**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**